ದಿಃ30.09.2022 ರಂದು ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಂದುವರಿದ ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರಿಂದಃ

1. ದಿಃ10.12.2014 ರಂದು ಆರೋಪಿ ನಂಬರ್ 6 ಮತ್ತು 7 ಇವರು ಹಾಜರುಪಡಿಸಿದ ಒಂದು ಪಲ್ಸರ್ ದ್ವಿಚಕ್ರ ವಾಹನಕ್ಕೆ ಸಂಬಂಧಿಸಿದಂತೆ ನಾನು ಮಾಡಿದ್ದ ಮೂಲ ಅಮಾನತ್ತಿನ ಪಂಚನಾಮೆಯನ್ನು ಈಗ ನೋಡಿ ಗುರುತಿಸುತ್ತಿರುವುದರಿಂದ, ಅದನ್ನು ಈಗ ನಿ.ಪಿ.35 ಎಂದು, ಮತ್ತು ಅದರ ಮೇಲಿರುವ ನನ್ನ ಸಹಿಯನ್ನು ನಿ.ಪಿ.35(ಎ) ಎಂದು ಗುರುತಿಸಲಾಯಿತು.

2. ಸದರಿ ದ್ವಿಚಕ್ರ ವಾಹನವನ್ನು ನಂತರ ನಮ್ಮ ಠಾಣಾ ಸ್ವತ್ತಿನ ಪಟ್ಟಿ ಸಂಖ್ಯೆ.231/2014 ಗೆ ಅಳವಡಿಸಿಕೊಂಡಿರುತ್ತೇನೆ.

3. ಸದರಿ ಅಮಾನತ್ತುಪಡಿಸಿಕೊಂಡಿದ್ದ ಪಲ್ಸರ್ ದ್ವಿಚಕ್ರ ವಾಹನಕ್ಕೆ ಸಂಬಂಧಿಸಿದ 3 ವರ್ಣರಂಜಿತ ಛಾಯಾಚಿತ್ರಗಳನ್ನು ಈಗ ನೋಡಿ ಗುರುತಿಸುತ್ತಿದ್ದು, ಅವುಗಳನ್ನು ಈಗಾಗಲೇ ನಿ.ಪಿ.14 ರಿಂದ 16 ಎಂದು ಗುರುತಿಸಿದ್ದು ಇರುತ್ತವೆ.

4. ಅದೇ ದಿನ ಚಾಸಾ.13 ಮತ್ತು 14 ಇವರ ಹೇಳಿಕೆಗಳನ್ನು ದಾಖಲಿಸಿಕೊಂಡಿರುತ್ತೇನೆ.

5. ಅದೇ ದಿನ ಆರೋಪಿ ನಂಬರ್ 6 ಮತ್ತು 7 ಇವರು ನ್ಯಾಯಾಲಯದಿಂದ ನಿರೀಕ್ಷಣಾ ಜಾಮೀನನ್ನು ಪಡೆದುಕೊಂಡು ಬಂದು ನನ್ನ ಮುಂದೆ ಹಾಜರಾದ ಪ್ರಯುಕ್ತ, ಅವರನ್ನು ದಸ್ತಗಿರಿ ನಿಯಮಗಳನ್ನು ಪಾಲಿಸಿ ದಸ್ತಗಿರಿ ಮಾಡಿ ಬಿಡುಗಡೆ ಮಾಡಿರುತ್ತೇನೆ.

6. ದಿಃ15.01.2015 ರಂದು ಚಾಸಾ.20 ಇವರ ಹೇಳಿಕೆಯನ್ನು ದಾಖಲಿಸಿಕೊಂಡಿರುತ್ತೇನೆ.

7. ದಿಃ14.02.2015 ರಂದು ಚಾಸಾ.1 ಈತನ ಪುನರ್ ಹೇಳಿಕೆಯನ್ನು ದಾಖಲಿಸಿಕೊಂಡಿರುತ್ತೇನೆ.

8. ಅದರ ಆಧಾರದ ಮೇಲೆ ಪ್ರಕರಣದಲ್ಲಿ ಎಸ್‌ಸಿ/ಎಸ್‌ಟಿ ಕಾಯಿದೆಯ ಕಲಂಗಳನ್ನು ನಅಳವಡಿಸಿಕೊಂಡಿರುತ್ತೇನೆ.

9. ತದನಂತರ ಮುಂದಿನ ತನಿಖೆಗೆಂದು ಪ್ರಕರಣದ ಕಡತವನ್ನು ಚಾಸಾ.37 ಇವರಿಗೆ ಹಸ್ತಾಂತರಿಸಿರುತ್ತೇನೆ.

(ಈ ಹಂತದಲ್ಲಿ, ಈ ನ್ಯಾಯಾಲಯದ ಸಂಬಂಧಪಟ್ಟ ಸಿಬ್ಬಂದಿಯವರಿಂದ ಈ ಪ್ರಕರಣದಲ್ಲಿ ಈಗಾಗಲೇ ತನಿಖಾಧಿಕಾರಿಗಳು ಹಾಜರುಪಡಿಸಿದ್ದ ಒಂದು ಪೆನ್‌ಡ್ರೈವ್ ಸಿಗುತ್ತಿಲ್ಲವೆಂದು ತಿಳಿಸಿರುವುದರ ಕಾರಣ, ಅಂದಿನ ಮತ್ತು ತದನಂತರದ ಸಂಬಂಧಪಟ್ಟ ಸಿಬ್ಬಂದಿಯವರಿಗೆ ನೋಟೀಸ್‌ಗಳನ್ನು ಜಾರಿ ಮಾಡಿ, ಅದನ್ನು ಶೋಧಿಸಿ ಹಾಜರುಪಡಿಸಲು ಈ ತಕ್ಷಣ ಕ್ರಮ ಕೈಗೊಳ್ಳಲು ಈ ನ್ಯಾಯಾಲಯದ ಆಡಳಿತಾಧಿಕಾರಿಗಳಿಗೆ ನಿರ್ದೇಶಿಸಲಾಗಿರುತ್ತದೆ. ಆ ಕಾರಣ, ಸದರಿ ಮುಂದಿನ ಮುಖ್ಯ ವಿಚಾರಣೆಗೆಂದು ಪ್ರಕರಣವನ್ನು ಮುಂದೂಡಲಾಗಿರುತ್ತದೆ)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ

(ಜಿ ಡಿ ಮಹಾವರ್ಕರ್)
1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು/
ವಿಶೇಷ ನ್ಯಾಯಾಧೀಶರು,
ರಾಮನಗರ.